# ದಿನಾಂಕ:29-06-2010 ರಂದು ನಡೆದ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಸಭೆಯಲ್ಲಿ ತೀರ್ಮಾನವಾದ ವಿಷಯ

**ವಿಷಯದ ಸಂಖ್ಯೆ:7(48)/2010-11**

ಟಿಪ್ಪಣಿಯಲ್ಲಿ ವಿವರಿಸಿರುವಂತೆ, ವಾರ್ಡ್ ಸಂಖ್ಯೆ: 169ರ ಜಯನಗರದಲ್ಲಿರುವ ಕಿತ್ತೂರು ರಾಣಿ ಚೆನ್ನಮ್ಮ ಆಟದ ಮೈದಾನದಲ್ಲಿ ಜಿಮ್ನಾಸ್ಟಿಕ್ ಕಟ್ಟಡದ ನಿರ್ಮಾಣದ ಕಾಮಗಾರಿಯನ್ನು ಕೈಗೆತ್ತಿಕೊಳ್ಳಲು ಜಯನಗರ ವಿಧಾನ ಸಭಾ ಕ್ಷೇತ್ರದ ಶಾಸಕರು ತಿಳಿಸಿರುತ್ತಾರೆ. ಸದರಿ ನಿವೇಶನದ ಅಳತೆ 1280.76 ಚ.ಮೀ ಇದ್ದು, ಉದ್ದೇಶದ ಕಟ್ಟಡದ ವಿಸ್ತೀರ್ಣ 3419.00 ಚ.ಮೀ ಇರುತ್ತದೆ. ಇದರಲ್ಲಿ ಕೆಳ ಅಂತಸ್ತು, ನೆಲ ಅಂತಸ್ತು, ಮೊದಲನೇ ಮಹಡಿ ಹಾಗೂ ಎರಡನೇ ಮಹಡಿಗಳನ್ನೊಳಗೊಂಡ ಕಟ್ಟಡವನ್ನು ನಿರ್ಮಾಣ ಮಾಡಲು ಯೋಜಿಸಿದೆ. ಈ ಅಂತಸ್ತುಗಳಲ್ಲಿ Weight lifting ತರಬೇತಿ, Floor exercises, practice area, sponge pit, parallel bars, horizontal bars, vault training, skill development hall, multipurpose hall, yoga meditation, aerobics etc., ಮುಂತಾದವುಗಳನ್ನು ಅಳವಡಿಸಲು ಉದ್ದೇಶಿಸಲಾಗಿದೆ.

ಈ ಹಿನ್ನೆಲೆಯಲ್ಲಿ 2009-10ನೇ ಸಾಲಿನ ಲೋಕೋಪಯೋಗಿ ಇಲಾಖೆ ಬೆಂಗಳೂರು ವೃತ್ತದ ದರಪಟ್ಟಿಯ ದರಗಳನ್ನು ಅಳವಡಿಸಿ ರೂ.354.00 ಲಕ್ಷಗಳಿಗೆ ಅಂದಾಜು ಪಟ್ಟಿಯನ್ನು ತಯಾರಿಸಲಾಗಿದೆ ಹಾಗೂ ಈ ಕಾಮಗಾರಿಗೆ ಅವಶ್ಯಕತೆ ಇರುವ ಎಲ್ಲಾ ತಾಂತ್ರಿಕ ಅಂಶಗಳನ್ನು ಅಳವಡಿಸಿ ಅಂದಾಜು ಪಟ್ಟಿಯನ್ನು ತಯಾರಿಸಲಾಗಿದೆ. ಈ ಅಂದಾಜು ಪಟ್ಟಿಗೆ ತಗಲುವ ವೆಚ್ಚವನ್ನು 2009-10ನೇ ಸಾಲಿನ ಆಯವ್ಯಯದಲ್ಲಿ ಜಯನಗರ ವಿಧಾನ ಸಭಾ ಕ್ಷೇತ್ರದ ಆಟದ ಮೈದಾನದ ಅಭಿವೃದ್ಧಿಗೆ ಮೀಸಲಿಟ್ಟಿರುವ ಅನುದಾನ ರೂ.300.00 ಲಕ್ಷಗಳಿಂದ ಭರಿಸಿಕೊಳ್ಳಲಾಗುವುದು.

ಮೇಲ್ಕಂಡ ಅಂಶಗಳ ಹಿನ್ನೆಲೆಯಲ್ಲಿ, ಪ್ರಸ್ತಾಪಿಸಿರುವ ಮೊತ್ತ ರೂ.354.00 ಲಕ್ಷಗಳ ಅಂದಾಜು ಪಟ್ಟಿಗೆ ಆಡಳಿತಾತ್ಮಕ ಅನುಮೋದನೆಗಾಗಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಸಭೆಯ ಮುಂದೆ ಮಂಡಿಸಿರುವ ಆಯುಕ್ತರವರ ದಿನಾಂಕ:26-06-2010 ರ ಟಿಪ್ಪಣಿ.

ಆಡಳಿತ ಪಕ್ಷದ ನಾಯಕರಾದ ಶ್ರೀ.ಬಿ.ಎಸ್.ಸತ್ಯನಾರಾಯಣರವರು ಈ ಕೆಳಕಂಡ ನಿರ್ಣಯವನ್ನು ಮಂಡಿಸಿದರು.

"ದಿನಾಂಕ:26/06/2010 ರ ಆಯುಕ್ತರವರ ಟಿಪ್ಪಣಿಯನ್ನು ಒಪ್ಪುವುದು"

ಶ್ರೀ.ವೆಂಕಟೇಶ್‌ಮೂರ್ತಿರವರು ಶ್ರೀ.ಬಿ.ಎಸ್.ಸತ್ಯನಾರಾಯಣರವರು ಮಂಡಿಸಿದ ನಿರ್ಣಯವನ್ನು ಅನುಮೋದಿಸಿದರು.

ಮಹಾಪೌರರು ಮೇಲ್ಕಂಡ ನಿರ್ಣಯವನ್ನು ಮತಕ್ಕೆ ಹಾಕಲಾಗಿ ನಿರ್ಣಯವು ಸರ್ವಾನುಮತದಿಂದ ಅಂಗೀಕೃತವಾಯಿತು.

**ನಿರ್ಣಯ:** "ದಿನಾಂಕ:26/06/2010 ರ ಆಯುಕ್ತರವರ ಟಿಪ್ಪಣಿಯನ್ನು ಒಪ್ಪುವುದೆಂದು ತೀರ್ಮಾನಿಸಲಾಯಿತು".

ಎಸ್.ಕೆ.ನಟರಾಜ

(ಎಸ್.ಕೆ.ನಟರಾಜ)
ಮಹಾಪೌರರು